ಕರ್ನಾಟಕ ವಿಧಾನ ಪರಿಷತ್ತು

ಸದಸ್ಯರ ಹೆಸರು : ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : 804

ಉತ್ತರಿಸಬೇಕಾದ ದಿನಾಂಕ : 25.09.2020.

ಉತ್ತರಿಸಬೇಕಾದ ಸಚಿವರು : ಮಾನ್ಯ ಪಶುಸಂಗೋಪನೆ, ಹಜ್ ಹಾಗೂ ವಕ್ಫ್ ಸಚಿವರು.

ಕ್ರ.ಸಂ	ಪ್ರಶ್ನೆಗಳು	ಉತ್ತರಗಳು
ಅ	ರಾಜ್ಯದ ಪಶುವೈದ್ಯ ಆಸ್ಪತ್ರೆಗಳಲ್ಲಿ ಜೀವರಕ್ಷಕ ಔಷಧಿಗಳ ಕೊರತೆ ಎದುರಾಗಿರುವುದಾಗಿ ಪತ್ರಿಕೆಗಳಲ್ಲಿ ವರದಿ ಪ್ರಸಾರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:	ರಾಜ್ಯದ ಪಶುವೈದ್ಯ ಆಸ್ಪತ್ರೆಗಳಲ್ಲಿ ಜೀವರಕ್ಷಕ ಔಷಧಿಗಳ ಕೊರತೆ ಎದುರಾಗಿರುವುದಾಗಿ ಪತ್ರಿಕೆಗಳಲ್ಲಿ ವರದಿ ಪ್ರಸಾರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.
ಆ	ಪಶುಸಂಗೋಪನಾ ಇಲಾಖೆಗೆ ಔಷಧಿ ಖರೀದಿ ಮಾಡಲು ಸರ್ಕಾರದಿಂದ ಅನುಮತಿ ನೀಡಲಾಗಿದೆಯೇ:	ಸರ್ಕಾರದ ಆದೇಶ ಸಂಖ್ಯೆ: ಪಸಂಮೀ 58 ಪಪಾಯೋ 2020 ದಿ: 16-06-2020 ರಲ್ಲಿ 2020-21 ನೇ ಸಾಲಿನ ಅನುಮೋದಿತ ಕ್ರಿಯಾ ಯೋಜನೆಯಲ್ಲಿ ಪಶುಸಂಗೋಪನಾ ಇಲಾಖೆಗೆ ಔಷಧಿ ಖರೀದಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಅನುಮತಿ ನೀಡಿದೆ. ಸರ್ಕಾರದ ಆದೇಶ ಸಂಖ್ಯೆ: ಆಇ 03 ಟಿಎಫ್‌ಪಿ 2018, ದಿನಾಂಕ: 14-5-2018 ರನ್ವಯ ಔಷಧಿ ಮತ್ತು ರಾಸಾಯನಿಕಗಳ ಖರೀದಿ ಆದೇಶ ನೀಡಿದ್ದು, ಸರಬರಾಜು ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ.
ಇ	ಪಶು ಔಷಧಿಗಳಿಗೆ ಇಡೀ ರಾಜ್ಯದಲ್ಲಿ ಏಕರೂಪದ ಬೆಲೆ ನಿಗದಿಪಡಿಸುವ ಬಗ್ಗೆ ಸರ್ಕಾರದ ನಿಲುವೇನು:	ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಪಶುವೈದ್ಯ ಸಂಸ್ಥೆಗಳಿಗೆ ದೈನಂದಿನ ಚಿಕಿತ್ಸೆ ನೀಡಲು ಅಗತ್ಯವಿರುವ ಔಷಧಿ, ರಾಸಾಯನಿಕಗಳು ಮತ್ತು ಫೀಡ್ ಸಪ್ಲಿಮೆಂಟ್‌ಗಳನ್ನು ಇಲಾಖೆಯ ತಾಂತ್ರಿಕ ಸಮಿತಿಯು ನಿರ್ಧರಿಸಿದ ನಂತರ, ಇಲಾಖೆಯು ಟೆಂಡರ್ ಅಧಿಸೂಚನೆ ಹೊರಡಿಸಿ ದರಗುತ್ತಿಗೆಯನ್ನು ನಿಗದಿಪಡಿಸುವ ಮುಖಾಂತರ ರಾಜ್ಯಾದ್ಯಂತ ಔಷಧಿ,

		ರಾಸಾಯನಿಕಗಳು ಮತ್ತು ಫೀಡ್ ಸಪ್ಲಿಮೆಂಟ್‌ಗಳನ್ನು ಸರಬರಾಜು ಮಾಡಲು ಏಕರೂಪ ಬೆಲೆ ನಿಗದಿಪಡಿಸಲು ಕ್ರಮ ಕೈಗೊಂಡಿರುತ್ತದೆ.
ಈ	ಪಶು ಆಸ್ಪತ್ರೆಗಳಲ್ಲಿ ಔಷಧಿಗಳು ಕೊರತೆಯಾಗದಂತೆ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ?	2020-21 ನೇ ಸಾಲಿನಲ್ಲಿ ರಾಜ್ಯ ವಲಯದಡಿ ಒಟ್ಟು ರೂ.1580.00 ಲಕ್ಷ ಹಾಗೂ ಜಿಲ್ಲಾ ಪಂಚಾಯತ್ ನಿಧಿಯಿಂದ ರೂ. 3500.02 ಲಕ್ಷಗಳ ಅನುದಾನದಲ್ಲಿ ಪಶುವೈದ್ಯ ಸಂಸ್ಥೆಗಳಿಗೆ ಅವಶ್ಯವಿರುವ ಔಷಧಿ, ರಾಸಾಯನಿಕಗಳು ಮತ್ತು ಫೀಡ್ ಸಪ್ಲಿಮೆಂಟ್‌ಗಳನ್ನು ಪೂರೈಸಲು ಅನುದಾನ ನಿಗದಿಪಡಿಸಲಾಗಿದ್ದು, ಈ ಪೈಕಿ ರಾಜ್ಯ ವಲಯದಡಿ ರೂ.878.50 ಲಕ್ಷಗಳಿಗೆ ಸರಬರಾಜು ಆದೇಶಗಳನ್ನು ನೀಡಲಾಗಿದ್ದು, ಔಷಧಿಗಳ ಸರಬರಾಜು ಪ್ರಕ್ರಿಯೆ ಚಾಲ್ತಿಯಲ್ಲಿದೆ. ಜಿಲ್ಲಾ ಪಂಚಾಯತ್ ನಿಧಿಯಡಿ ನಿಗದಿಪಡಿಸಲಾದ ಅನುದಾನದಲ್ಲಿ ಔಷಧಿ, ರಾಸಾಯನಿಕಗಳು ಮತ್ತು ಫೀಡ್ ಸಪ್ಲಿಮೆಂಟ್‌ಗಳನ್ನು ಪೂರೈಸಲು ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ.

ಪಸಂಮೀ ಇ-242 ಸಲೆವಿ 2020

ಪ್ರಭು ಬಿ. ಚವ್ಹಾಣ್

ಪಶುಸಂಗೋಪನೆ, ಹಜ್ ಮತ್ತು ವಕ್ಫ್ ಸಚಿವರು.